ಅ) ಈ ಗ್ರಾಮಾಂತರ ಪೋಲೀಸ್ ಠಾಣೆಯನ್ನು ತೆರೆಯುವ ಬಗ್ಗೆ ಸರ್ಕಾರವು ಏನು ಕ್ರಮ ಕೈಗೊಂಡಿದೆ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಉಳಿದಿರುವ ಪ್ರಕರಣಗಳು

161 - ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಜೂನ್ 1992ರ ಅಂತ್ಯದವರೆಗೆ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು?

ಆ) ಉಚ್ಚ ನ್ಯಾಯಾಲಯದಲ್ಲಿ ನ್ಯಾಯಾಧೀಶರುಗಳ ಹುದ್ದೆಗಳು ಖಾಲಿ ಇವೆಯೆ?

ಇ) ಹಾಗಿದ್ದಲ್ಲಿ, ಎಷ್ಟು ಹುದ್ದೆಗಳು ಖಾಲಿ ಇವೆ?

ಈ) ಬಾಕಿ ಇರುವ ಪ್ರಕರಣಗಳನ್ನು ವಿಲೇವಾರು ಮಾಡಲು ಹೆಚ್ಚುವರಿ ನ್ಯಾಯಾಧೀಶರುಗಳನ್ನು ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ?

ಉ) ಬಾಕಿ ಇರುವ ಪ್ರಕರಣಗಳ ವಿಲೇವಾರಿಗಾಗಿ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ದಿನಾಂಕ 30-6-1992 ರಲ್ಲಿ 1,01,169 ಸಿವಿಲ್ ಪ್ರಕರಣಗಳು ಮತ್ತು 2,785 ಕ್ರಿಮಿನಲ್ ಪ್ರಕರಣಗಳು (ಒಟ್ಟು 1,03,954 ಪ್ರಕರಣಗಳು) ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇದ್ದವು.

ಆ) ಹೌದು

ಇ) ಖಾಲಿ ಹುದ್ದೆಗಳು 9 (ಒಂಬತ್ತು)

(1) ಖಾಯಂ ನ್ಯಾಯಾಧೀಶರ ಹುದ್ದೆ 7

(2) ಹೆಚ್ಚುವರಿ ನ್ಯಾಯಾಧೀಶರ ಹುದ್ದೆ 2

ಈ) ಉಚ್ಚ ನ್ಯಾಯಾಲಯದ ನ್ಯಾಯಾಧೀಶರ ನೇಮಕಾತಿಯನ್ನು ರಾಷ್ಟ್ರಪತಿಯವರು ಮಾಡುವುದರಿಂದ ಈ ಬಗ್ಗೆ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳುವುದು.

ಉ) ಉಚ್ಚ ನ್ಯಾಯಾಲಯವು ಈ ಪ್ರಶ್ನೆಗೆ ಉತ್ತರವನ್ನು ನೀಡಿರುವುದಿಲ್ಲ.

High Court Bench at Dharwad and Gulbarga

162 - Sri Ramlinga Reddy (Jayanagara) : Will the Chief Minister be pleased to State

a) Whether the Government has taken a decision to set up a Bench of Karnataka High Court at Dharwad and Gulbarga?

b) If so, the steps taken in this regard?

c) When will these Benches be set up?

d) The number of cases proposed to be decided by these Benches?

Sri M. Veerappa Moily (Chief Minister) :